**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ–181 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ–181/ಪಿ.ಆರ್/ 181 /2021–22 ದಿನಾಂಕ : 18–12–2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ– ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020–21 ದಿನಾಕ :21–09–2020 ರವರ ಆದೇಶದಂತೆ ದಿನಾಂಕ :18–12–2021 ರಂದು ವಾರ್ಡ್ ಸಂಖ್ಯೆ–181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :18–12–2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಪಿಗಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಬಾಕಿ ಇರುವ ಡಾಂಬರೀಕರಣ ರಸ್ತೆಗಳನ್ನು ಶೀಘ್ರವಾಗಿ ಮುಕ್ತಾಯಗೊಳಿಸಲು ಸೂಚಿಸಲಾಗಿರುತ್ತದೆ.
2) ಕೋವಿಡ್–19 ಸಾಂಕ್ರಾಮಿಕ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ ಅತೀ ಹೆಚ್ಚು ಟೆಸ್ಟ್‌ಗಳನ್ನು ಮಾಡಲು ನೊಡೆಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
3) ಇಸ್ರೋ ಬಡಾವಣೆಯ ವ್ಯಾಪ್ತಿಯಲ್ಲಿ ಸೊಳ್ಳೆಗಳು ಹೆಚ್ಚಾಗಿರುವ ಮೇರೆಗೆ ಸೊಳ್ಳೆಗಳಿಗೆ ಔಷಧಿಗಳನ್ನು ಸಿಂಪಡಿಸುವಂತೆ ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಲಾಗಿರುತ್ತದೆ.
4) ಕುಮಾರಸ್ವಾಮಿ ಬಡಾವಣೆಯ ವ್ಯಾಪ್ತಿಯಲ್ಲಿರುವ ಉಧ್ಯಾನವನಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ನೋಡೆಲ್ ಅಧಿಕಾರಿಯವರು ವಾರ್ಡ್ ಸಮಿತಿ ಸಭೆಗೆ ತಿಳಿಸಿರುತ್ತಾರೆ.
5) ಕದಿರೇನಹಳ್ಳಿ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.